ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ		474 (521)
ಸದಸ್ಯರ ಹೆಸರು		ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ		21.02.2022
ಉತ್ತರಿಸಬೇಕಾದವರು		ಉನ್ನತ ಶಿಕ್ಷಣ ಸಚಿವರು
ಪ್ರಶ್ನೆ		ಉತ್ತರ
(ಅ)	ಪದವಿ ಪೂರ್ವ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರು ಯು.ಜಿ.ಸಿ. ಶೈಕ್ಷಣಿಕ ವಿದ್ಯಾರ್ಹತೆಯನ್ನು ಪಡೆದುಕೊಂಡಿರುವವರಿಗೆ ಉನ್ನತ ಶಿಕ್ಷಣ ಇಲಾಖೆಯಲ್ಲಿ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಶೇ. 5% ಮೀಸಲಾತಿ ನೀಡಲು ಸರ್ಕಾರ ಚಿಂತಿಸುವುದೇ;	ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.
(ಆ)	ಉನ್ನತ ಶಿಕ್ಷಣ ಇಲಾಖೆಯಲ್ಲಿ ಅಧ್ಯಾಪಕೇತರರಿಗೆ ಶೇ. 5% ಮೀಸಲಾತಿ ನಿಗದಿಗೊಳಿಸಿರುವಂತೆ ಯು.ಜಿ.ಸಿ. ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಪಿ.ಯು. ಉಪನ್ಯಾಸಕರಿಗೂ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಶೇ. 5% ಮೀಸಲಾತಿ ನಿಗದಿಪಡಿಸಲು ಸರ್ಕಾರಕ್ಕಿರುವ ತೊಂದರೆಗಳೇನು;	ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 91 ಡಿಸಿಇ 2004, ದಿನಾಂಕ:25.09.2009 ರಲ್ಲಿ ಪ್ರಕಟಿಸಲಾಗಿದ್ದು, ಈ ಕೆಳಕಂಡಂತೆ ಆದೇಶಿಸಲಾಗಿದೆ. Ninety-five percent by direct recruitment and five percent shall be filled by recruitment of persons in the Group-C Cadres who have completed the period of probation in the Department of Collegiate Education. ಅದರಂತೆ, ಮೇಲ್ಕಂಡ ನಿಯಮಗಳನ್ವಯ ಯು.ಜಿ.ಸಿ. ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಪದವಿ ಪೂರ್ವ ಉಪನ್ಯಾಸಕರಿಗೆ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಶೇ.5 ರಷ್ಟು ಮೀಸಲಾತಿ ನೀಡಲು ಅವಕಾಶವಿರುವುದಿಲ್ಲ. ಯು.ಜಿ.ಸಿ. ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಪದವಿ ಪೂರ್ವ ಉಪನ್ಯಾಸಕರು ನೇರ ನೇಮಕಾತಿ ನಿಯಮಾವಳಿಗಳಂತೆ ಮುಕ್ತ ಸ್ಪರ್ಧೆಯ ಮೂಲಕ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅರ್ಜಿ ಸಲ್ಲಿಸಿ, ಆಯ್ಕೆ ಹೊಂದಲು ಅವಕಾಶವಿರುತ್ತದೆ.

(ಇ)	ಯಾವ ಕಾಲಮಿತಿಯಲ್ಲಿ ಮೀಸಲಾತಿ ನಿಗದಿಪಡಿಸಲಾಗುವುದು?	ಉದ್ಭವಿಸುವುದಿಲ್ಲ.

ಇಡಿ 58 ಡಿಸಿಇ 2022

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು